# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 804 (1006) |
| ಸದಸ್ಯರ ಹೆಸರು | : | ಡಾ. ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) |
| ದಿನಾಂಕ | : | 14.03.2025 |
| ಉತ್ತರಿಸುವ ಸಚಿವರು | : | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಜಾನಪದ ಕಲೆ ಮತ್ತು ಸಂಸ್ಕೃತಿ ನಶಿಸಿಹೋಗುವ ಹಂತ ತಲುಪಿದ್ದು ಇದನ್ನು ಉಳಿಸಿ ಬೆಳೆಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವತಿಯಿಂದ ಜಾನಪದ ಕಲೆ ಮತ್ತು ಸಂಸ್ಕೃತಿಯನ್ನು ಪರಿಚಯಿಸಲು ವಿಧಾನಸೌಧ ಮುಂಭಾಗದ ಭವ್ಯ ಮೆಟ್ಟಿಲುಗಳ ಮೇಲೆ ದಿನಾಂಕ:30.11.2024 ರಂದು "ನಮ್ಮ ಜಾತ್ರೆ" ಶೀರ್ಷಿಕೆಯಲ್ಲಿ ವಿವಿಧ ಜಾನಪದ ಕಲಾತಂಡಗಳ ಪ್ರದರ್ಶನವನ್ನು ಹಾಗೂ ವಿಧಾನಸೌಧದಿಂದ ಮಹಾತ್ಮ ಗಾಂಧಿ ಮೆಟ್ರೋ ನಿಲ್ದಾಣದವರೆಗೆ ಮೆರವಣಿಗೆ ಕಾರ್ಯಕ್ರಮವನ್ನು ಆಯೋಜಿಸಲಾಗಿರುತ್ತದೆ. |
| ಆ | ಗ್ರಾಮೀಣ ಪ್ರದೇಶದಲ್ಲಿ ಹಾಡುವ ಜಾನಪದ ಹಾಡುಗಳಲ್ಲಿ ಜೀವನದ ಮೌಲ್ಯಗಳನ್ನು ತಿಳಿಸುವ ಅಂಶಗಳಿದ್ದು, ಇದನ್ನು ಹೆಚ್ಚು ಪ್ರಚಾರ ಮಾಡಲು ಸರ್ಕಾರ ಯಾವ ರೀತಿಯ ಕಾರ್ಯಕ್ರಮಗಳನ್ನು ಹಾಕಿಕೊಳ್ಳಲಿದೆ. | ಕರ್ನಾಟಕ ಜಾನಪದ ಅಕಾಡೆಮಿಯ ವತಿಯಿಂದ ಜಾನಪದ ಹಾಡುಗಾರಿಕೆ, ತತ್ವಪದ, ಭಜನೆ, ಸಂಪ್ರದಾಯದ ಪದ, ಸೋಬಾನೆ ಪದ, ಗೀಗೀ , ಲಾವಣಿ ಮುಂತಾದ ಜಾನಪದ ಕಲೆಗಳನ್ನು ಮತ್ತು ಕಲಾವಿದರನ್ನು ಪ್ರೋತ್ಸಾಹಿಸುವ ಮತ್ತು ಉಳಿಸಿ ಬೆಳೆಸುವ ದೃಷ್ಟಿಯಿಂದ ರಾಜ್ಯಾದ್ಯಂತ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಬರಲಾಗುತ್ತಿದೆ.<br><br>ಅಲ್ಲದೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಜಾನಪದ ಕ್ಷೇತ್ರದಲ್ಲಿ ಅನುಪಮ ಸೇವೆ ಸಲ್ಲಿಸಿದ ಸಾಹಿತಿ/ ಕಲಾವಿದರನ್ನು ಗುರುತಿಸಿ ಪ್ರತಿ ವರ್ಷ ಅಕಾಡೆಮಿ ಪ್ರಶಸ್ತಿ, ರಾಜ್ಯೋತ್ಸವ ಪ್ರಶಸ್ತಿ ಹಾಗೂ ಜಾನಪದ ಶ್ರೀ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಗುತ್ತದೆ. |
| ಇ | ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ತಿಂಗಳಿಗೊಂದು ಸಾಂಸ್ಕೃತಿಕ ಕಾರ್ಯಕ್ರಮ ಗಳನ್ನು ನಡೆಸಲು ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಎರಡು ತಿಂಗಳಿಗೊಮ್ಮೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಲು ಕಾರ್ಯಕ್ರಮ ಹಾಕಿಕೊಳ್ಳ ಲಾಗುವುದೆ? | ಇಲಾಖೆಯ ಪ್ರಾಯೋಜನೆಯಡಿ ಜಾನಪದ, ಸುಗಮ ಸಂಗೀತ, ನೃತ್ಯ, ನಾಟಕ, ಯಕ್ಷಗಾನ ಮುಂತಾದ ಕಲೆಗಳನ್ನು ಪ್ರದರ್ಶಿಸಲು ಅನುಕೂಲವಾಗುವಂತೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಸಂಘ ಸಂಸ್ಥೆಗಳಿಗೆ ಕಲಾ ತಂಡಗಳನ್ನು ಪ್ರಾಯೋಜಿಸಲಾಗುತ್ತಿದೆ.<br><br>ಪ್ರತಿ ಬುಧವಾರ ಕಿದ್ವಾಯಿ ಸಂಸ್ಥೆ, ಬೆಂಗಳೂರಿನಲ್ಲಿ ಸಾಂಸ್ಕೃತಿಕ ಕಾರ್ಯಕ್ರಮವನ್ನು ಏರ್ಪಡಿಸಲಾಗುತ್ತಿದೆ.<br><br>ಭಾರತೀಯ ವಿದ್ಯಾ ಭವನ, ಬೆಂಗಳೂರು ಇಲ್ಲಿ ಪ್ರತಿ ಶುಕ್ರವಾರ ಸಂಜೆ ಏರ್ಪಡಿಸುವ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ನೃತ್ಯ, ಜಾನಪದ ಸಂಗೀತ, ಸುಗಮ ಸಂಗೀತ ಮುಂತಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. |

ಸಂಖ್ಯೆ: ಕಸಂವಾ 34 ಕವಿಸ 2025.

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು